ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂ. DTE-ADMIOACM1/ /2024

ಆಯುಕ್ತರವರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:01-04-2024.

-:: ಸುತ್ತೋಲೆ ::-

**ವಿಷಯ:** ರಾಜ್ಯದ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಇಂಜನಿಯರಿಂಗ್ ಕಾಲೇಜುಗಳಲ್ಲಿ ಪ್ರಥಮ ವರ್ಷದಲ್ಲಿ ಭರ್ತಿ ಯಾಗದೇ ಖಾಲಿ ಉಳಿದಿರುವ ಸೀಟುಗಳು ಹಾಗೂ ಲ್ಯಾಟರಲ್ ಎಂಟ್ರಿ ಅಧ್ಯರ್ಪಣೆ ಸೀಟುಗಳ ಮಾಹಿತಿಯನ್ನು ಒದಗಿಸುವ ಬಗ್ಗೆ.

**ಉಲ್ಲೇಖ:** **ಸರ್ಕಾರದ ಪತ್ರ ಸಂ. ಇಡಿ 30 ಡಿಟಿಇ 2024, ದಿ:16.03.2024**

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2023-24ನೇ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಪ್ರಥಮ ವರ್ಷದಲ್ಲಿ ಭರ್ತಿ ಯಾಗದೇ ಖಾಲಿ ಉಳಿದಿರುವ ಸೀಟುಗಳನ್ನು 2024-25ನೇ ಶೈಕ್ಷಣಿಕ ಸಾಲಿನಲ್ಲಿ ಡಿಪ್ಲೋಮಾ ಲ್ಯಾಟರಲ್ ಎಂಟ್ರಿ ಮೂಲಕ ಭರ್ತಿ ಮಾಡುವಂತೆ ಕೋರಿ ಸರ್ಕಾರಕ್ಕೆ ಸಲ್ಲಿಸುವ ಅಧ್ಯರ್ಪಣೆ ಸೀಟುಗಳನ್ನು (Surrender Seats) ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಮೂಲಕ ಭರ್ತಿ ಮಾಡುವ ನಿಟ್ಟಿನಲ್ಲಿ, ಸೀಟ್ ಮ್ಯಾಟ್ರಿಕ್ಸ್ ತಯಾರಿಸುವ ಪ್ರಸ್ತಾವನೆಯನ್ನು ಪರಿಶೀಲಿಸಲು ಪ್ರಥಮ ವರ್ಷದಲ್ಲಿ ಭರ್ತಿ ಯಾಗದೇ ಖಾಲಿ ಉಳಿದಿರುವ ಸೀಟುಗಳ ಮಾಹಿತಿಯನ್ನು (SNQ ಹೊರತುಪಡಿಸಿ) ಒದಗಿಸುವಂತೆ ಉಲ್ಲೇಖಿತ ಸರ್ಕಾರದ ಪತ್ರದಲ್ಲಿ ಕೋರಲಾಗಿದೆ.

ರಾಜ್ಯದ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಕೋರ್ಸುಗಳಿಗೆ **2024-25ನೇ ಸಾಲಿಗೆ ಡಿಪ್ಲೋಮಾಧಾರರಿಗೆ ಲ್ಯಾಟರಲ್ ಎಂಟ್ರಿ ಮೂಲಕ ಬಿ.ಇ 2ನೇ ವರ್ಷ/03ನೇ ಸೆಮಿಸ್ಟರ್ ಬಿ.ಇ ಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಸೀಟು ಹಂಚಿಕೆ ಮಾಡಲು 2023-24ನೇ ಸಾಲಿನಲ್ಲಿ ಪ್ರಥಮ ವರ್ಷದ ಬಿ.ಇ ಕೋರ್ಸುಗಳ ಪ್ರವೇಶಾತಿ ಪ್ರಕ್ರಿಯೆ ಮುಗಿದ ನಂತರ ಭರ್ತಿ ಆಗದೆ ಖಾಲಿ ಉಳಿದಿರುವ ಸೀಟುಗಳ (SNQ ಹೊರತುಪಡಿಸಿ) ಮಾಹಿತಿಯನ್ನು ಹಾಗೂ 2024-25ನೇ ಸಾಲಿಗೆ ಡಿಪ್ಲೋಮಾ ಲ್ಯಾಟರಲ್ ಎಂಟ್ರಿ ಅಧ್ಯರ್ಪಣೆ ಸೀಟುಗಳ (Surrender Seats) ಮಾಹಿತಿಯನ್ನು ನೇರವಾಗಿ ದಿನಾಂಕ:05.04.2024ರ ಒಳಗೆ ಸರ್ಕಾರಕ್ಕೆ ಸಲ್ಲಿಸಲು** ಅದರ ಮಾಹಿತಿಯ ಪ್ರತಿಯನ್ನು ಆಯುಕ್ತರ ಕಛೇರಿ, ತಾಂತ್ರಿಕ ಶಿಕ್ಷಣ ಇಲಾಖೆಗೆ ಸಲ್ಲಿಸುವಂತೆ ಈ ಮೂಲಕ ಸೂಚಿಸಲಾಗಿದೆ.

***"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"***

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

ಇವರಿಗೆ,

ರಾಜ್ಯದ ಸರ್ಕಾರಿ / ಅನುದಾನಿತ / ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ - ಸೂಕ್ತ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ.

**ಪ್ರತಿ ಇವರಿಗೆ ಮಾಹಿತಿಗಾಗಿ:-**

1. ಸರ್ಕಾರದ ಅಧೀನ ಕಾರ್ಯದರ್ಶಿ, ಶಿಕ್ಷಣ ಇಲಾಖೆ(ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಜ್ಞಾನ ಸಂಗಮ, ಬೆಳಗಾವಿ

**ಪ್ರತಿ:-**

1. ಆಯುಕ್ತರ ಆಪ್ತಶಾಖೆಗೆ.
2. ನಿರ್ದೇಶಕರ ಆಪ್ತಶಾಖೆಗೆ.
3. ಇ-ಗವರ್ನೆನ್ಸ್ ವಿಭಾಗಕ್ಕೆ - ಸದರಿ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
4. ಕಛೇರಿ ಪ್ರತಿ.